**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 29ನೇ ಏಪ್ರಿಲ್ ತಿಂಗಳು 2026ರಂದು

**ಸಿಸಿ ನಂ.1060/2025**

**ಫಿರ್ಯಾದುದಾರರುಃ** ಶ್ರೀ.ಆರ್.ವಿಶ್ವನಾಥ, ಬಿನ್ ರಾಜಣ್ಣ,
ಸುಮಾರು 48 ವರ್ಷ, ವಾಸಃ ಧರ್ಮಪುರ ಗ್ರಾಮ
ಮತ್ತು ಪೋಸ್ಟ್, ಬಿಳಿಕೆರೆ ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀಮತಿ.ಖೈರುನ್ನಿಸಾ,ಕೋಂ ನಯಾಜ್,
ಸುಮಾರು 27 ವರ್ಷ, ವಾಸಃ ಬ್ಯಾಡರಹಳ್ಳಿ ಕಾಲೋನಿ
ರತ್ನಪುರಿ ಪೋಸ್ಟ್, ಕಸಬಾ ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**ಭಾರತೀಯ ನಾಗರಿಕಾ ಸುರಕ್ಷಾ ಸಂಹಿತೆಯ ಕಲಂ 274 ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಆರ್.ವಿಶ್ವನಾಥರವರು ಹಲವಾರು ವರ್ಷಗಳಿಂದ ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ನೀವು ಮಾರ್ಚ್– 2025ರಂದು ನಿಮ್ಮ ಕಾನೂನು ಬದ್ಧ ಅವಶ್ಯಕತೆಗಾಗಿ ಅಂದರೆ ಹಿಂದಿನ ಸಾಲ ತೀರಿಸಲು ಮತ್ತು ಗೃಹಕೃತ್ಯದ ಖರ್ಚಿಗಾಗಿ ಅವರಿಂದ ರೂ.2,00,000/– ಗಳನ್ನು 3 ತಿಂಗಳ ಒಳಗಾಗಿ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ನೀವು 25.07.2025ರ ದಿನಾಂಕ ನಮೂದಿಸಿ ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಖ್ಯೆ 657955 ಅನ್ನು ರೂ.2,00,000/– ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಫಿರ್ಯಾದಿದಾರರು ತಮ್ಮ ಖಾತೆ ಹೊಂದಿದ ಎಸ್.ಬಿ.ಐ, ಎ.ಸಿ.ಬಿ ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 28.07.2025ರಂದು ವಾಪಾಸ್ ಆಗಿದ್ದು, ಈ ಬಗ್ಗೆ ಫಿರ್ಯಾದಿದಾರರು

ದಿನಾಂಕಃ 06.08.2025ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನೋಟೀಸನ್ನು ನೀಡಿದ್ದು, ಸದರಿ ನೋಟೀಸು ದಿನಾಂಕಃ 09.08.2025ರಂದು ನಿಮಗೆ ಜಾರಿಯಾಗಿದ್ದರೂ ಸಹ ನೀವು ಚೆಕ್‌ನಲ್ಲಿ ನಮೂದಿಸಿದ ಹಣವನ್ನು ನೀಡದೆ ನೊಟೀಸಿಗೆ ಉತ್ತರವನ್ನು ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ